ಶ್ರೀ ವಾದಿರಾಜತೀರ್ಥ ವಿರಚಿತ

# ಶ್ರೀ ಶ್ರೀನಿವಾಸಕಲ್ಯಾಣ

ಸ್ತ್ರೀಯರೆಲ್ಲರು ಬನ್ನಿರೆ । ಶ್ರೀನಿವಾಸನ ಪಾಡಿರೇ
ಜ್ಞಾನಗುರುಗಳಿಗೋಂದಿಸಿ । ಮುಂದೆ ಕಥೆಯ ಪೇಳುವೆ ॥
ಗಂಗಾತೀರದಿ ಋಷಿಗಳು । ಅಂದು ಯಾಗವ ಮಾಡಿದರು
ಬಂದು ನಾರದರು ನಿಂತುಕೊಂಡು । ಯಾರಿಗೆಂದು ಕೇಳಲು
ಆರಿತು ಬರಬೇಕೆನುತ । ಆ ಮುನಿಯು ತೆರಳಿದ

ಭೃಗುಮುನಿಯು ತೆರಳಿದ

ನಂದಗೋಪನ ಮಗನ ಕಂದನ । ಮಂದಿರಕಾಗೆ ಬಂದನು
ವೇದಗಳನೆ ಓದುತಾ । ಹರಿಯನೂ ಕೊಂಡಾಡುತಾ
ಅಲ್ಲಿರುವ ಬ್ರಹ್ಮನ ನೋಡಿದಾ । ಕೈಲಾಸಕ್ಕೆ ಬಂದನು ಕಂಭುಕಠನು ಪಾರ್ವತೀಯೂ ।
ಕಲೆತಿರುವುದ ಕಂಡನು ಸೃಷ್ಟಿಯೊಳಗೆ ನಿನ್ನ ಲಿಂಗ ।
ಶ್ರೇಷ್ಠವಾಗಲೆಂದನು ವೈಕುಂಠಕೆ ಬಂದನು । ವಾರಿಜಾಕ್ಷನ ಕಂಡನು
ಕೆಟ್ಟ ಕೋಪದಿಂದ ಒದ್ದರೆ । ಎಷ್ಟು ನೊಂದಿತೆಂದನು
ತಟ್ಟನೆ ಬಿಸಿನೀರಿನಿಂದ । ನೆಟ್ಟಗೆ ಪಾದ ತೊಳೆದನು
ಬಂದ ಕಾರ್ಯ ಆಯುತೆಂದು । ಅಂದು ಮುನಿಯು ತೆರಳಿದ
ಬಂದು ನಿಂದ ಸಭೆಯೊಳಗೆ । ಇಂದಿರೇಶನ ಹೊಗಳಿದ
ಪತಿಯ ಕೂಡೆ ಕಲಹ ಮಾಡಿ । ಕೊಲ್ಹಾಪುರಕ್ಕೆ ಹೋದಳು
ಸತಿಯು ಪೋಗೆ ಪತಿಯು ಹೊರಟು । ಗಿರಿಗೆ ಬಂದು ಸೇರಿದ
ಹುತ್ತದಲ್ಲೇ ಹತ್ತು ಸಾವಿರ ವರುಷ । ಗುಪ್ತವಾಗಿ ಇದ್ದನು.
ಬ್ರಹ್ಮ ಧೇನುವಾದನು । ರುದ್ರ ವತ್ಸನಾದನು
ಧೇನು ಮುಂದೆ ಮಾಡಿಕೊಂಡು । ಗೋಪಿ ಹಿಂದೆ ಬಂದಳು.
ಕೋಟಿ ಹೊನ್ನು ಬಾಳುವೋದು । ಕೊಡದ ಹಾಲು ಕರೆವುದು
ಪ್ರೀತಿಯಿಂದಲಿ ತನ್ನ ಮನೆಗೆ । ತಂದುಕೊಂಡನು ಚೋಳನು
ಒಂದು ದಿವಸ ಕಂದಗೆ ಹಾಲು । ಚೆಂದದಿಂದಲಿ ಕೊಡಲಿಲ್ಲ
ಅಂದು ರಾಯನ ಮಡದಿ ಕೋಪಿಸಿ । ಬಂದು ಗೋಪನ ಹೊಡೆದಳು
ಧೇನು ಮುಂದೆ ಮಾಡಿಕೊಂಡು । ಗೋಪ ಹಿಂದೆ ನಡೆದನು ।

ಕಾಮಧೇನು ಕರೆದ ಹಾಲು । ಹರಿಯ ಶಿರಕ್ಕೆ ಬಿದ್ದಿತು
ಇಷ್ಟು ಕಷ್ಟ ಬಂದಿತೆಂದು । ಪೆಟ್ಟು ಬಡಿಯೆ ಹೋದನು
ಕೃಷ್ಣ ತನ್ನ ಮನದಲ್ಲಿ ಯೋಚಿಸಿ । ಕೊಟ್ಟ ತನ್ನ ಶಿರವನು
ಏಳು ತಾಳೆಮರದ ಉದ್ದ । ಏಕವಾಗಿ ಹರಿಯಿತು
ರಕ್ತವನ್ನು ನೋಡಿ ಗೋಪ । ಮತ್ತೆ ಸ್ವರ್ಗಕ್ಕೇರಿದ
ಕಷ್ಟವನ್ನು ನೋಡಿ ಗೋವು । ಅಷ್ಟು ಬಂದು ಹೇಳಿತು
ತಟ್ಟನೆ ರಾಯ ಎದ್ದು ಗಿರಿಗೆ । ಬಂದು ಬೇಗ ಸೇರಿದ
ಏನು ಕಷ್ಟ ಇಲ್ಲಿ ಹೀಗೆ । ಯಾವ ಪಾಪಿ ಮಾಡಿದ
ಇಷ್ಟು ಕಷ್ಟ ಕೊಟ್ಟ ಕಾರಣ । ಭ್ರಷ್ಟ ಪಿಶಾಚಿಯಾಗೆಂದ
ಪೆಟ್ಟು ವೇದನೆ ತಾಳಲಾರದೆ । ಬೃಹಸ್ಪತೀಯ ಕರೆಸಿದ
ಅರುಣ ಉದಯದಲ್ಲೆದ್ದು । ಔಷಧಕ್ಕೆ ಪೋದನು
ಕ್ರೋಡರೂಪಿಯ ಕಂಡನು । ಕೂಡಿ ಮಾತನಾಡಿದನು
ಇರುವುದಕ್ಕೆ ಸ್ಥಳವು ಎನಗೆ । ಏರ್ಪಾಡಾಗಬೇಕೆಂದ
ನೂರು ಪಾದ ಭೂಮಿ ಕೊಟ್ಟರೆ । ಮೊದಲು ಪೂಜೆ ನಿಮಗೆಂದ
ಪಾಕ ಪಕ್ವ ಮಾಡುವುದಕ್ಕೆ । ಆಕೆ ಬಕುಳೆ ಬಂದಳು
ಭಾನುಕೋಟಿತೇಜನೀಗ । ಬೇಟೆಯಾಡ ಹೊರಟನು
ಮಂಡೆ ಬಾಚಿ ದೊಂಡೆ ಹಾಕಿ । ದುಂಡುಮಲ್ಲಿಗೆ ಮುಡಿದನು
ಹಾರ ಪದಕ ಕೊರಳಲ್ಲಿ ಹಾಕಿ । ಫಣೆಗೆ ತಿಲಕವಿಟ್ಟನು
ಅಂಗುಲಿಗೆ ಉಂಗುರ । ರಂಗ ಶೃಂಗಾರವಾದವು
ಪಟ್ಟೆನುಟ್ಟು ಕಚ್ಚೆ ಕಟ್ಟಿ । ಪೀತಾಂಬರವ ಹೊದ್ದನು
ಢಾಳು ಕತ್ತಿ ಉಡಿಯಲ್ಲಿ ಸಿಕ್ಕಿ । ಜೋಡು ಕಾಲಲ್ಲಿ ಮೆಟ್ಟಿದ
ಕರದಿ ವೀಳ್ಯವನ್ನೆ ಪಿಡಿದು । ಕನ್ನಡೀಯ ನೋಡಿದ
ಕನಕಭೂಷಣವಾದ ತೊಡಿಗೆ । ಕಮಲನಾಭ ತೊಟ್ಟನು
ಕನಕಭೂಷಣವಾದ ಕುದುರೆ । ಕಮಲನಾಭ ಏರಿದ
ಕರಿಯ ಹಿಂದೆ ಹರಿಯು ಬರಲು । ಕಾಂತೆರೆಲ್ಲ ಕಂಡರು
ಯಾರು ಇಲ್ಲಿ ಬರುವರೆಂದು । ದೂರ ಪೋಗಿರೆಂದರು
ನಾರಿಯರಿರುವ ಸ್ಥಳಕ್ಕೆ । ಯಾವಪುರುಷ ಬರುವನು
ಎಷ್ಟು ಹೇಳೆ ಕೇಳ ಕೃಷ್ಣ । ಕುದುರೆ ಮುಂದೆ ಬಿಟ್ಟನು
ಅಷ್ಟು ಮಂದೀರೆಲ್ಲ ಸೇರಿ । ಪೆಟ್ಟುಗಳನು ಹೊಡೆದರು
ಕಲ್ಲು ಮಳೆಯ ಕರೆದರಾಗ । ಕುದುರೆ ಕೆಳಗೆ ಬಿದ್ದಿತು
ಕೇಶ ಬಿಚ್ಚಿ ವಾಸುದೇವ । ಶೇಷಗಿರಿಗೆ ಬಂದನು
ಪರಮಾನ್ನ ಮಾಡಿದ್ದೇನೆ । ಉಣ್ಣು ಬೇಗ ಎಂದಳು

ಅಮ್ಮ ಎನಗೆ ಅನ್ನ ಬೇಡ । ಎನ್ನ ಮಗನೆ ವೈರಿಯೇ
ಕಣ್ಣಿಲ್ಲಾದ ದೈವ ಅವಳ । ನಿರ್ಮಾಣವ ಮಾಡಿದ
ಯಾವ ದೇಶ ಯಾವ್ಯೋಳಾಕೆ । ಎನಗೆ ಪೇಳು ಎಂದಳು
ನಾರಾಯಾಣನ ಪುರಕೆ ಪೋಗಿ । ರಾಮ ಕೃಷ್ಣರ ಪೂಜಿಸಿ
ಕುಂಜಮಣಿಯ ಕೊರಳಲ್ಲಿ ಹಾಕಿ । ಕೂಸಿನ ಕೊಂಕಳಲ್ಲೆತ್ತಿದಾ
ಧರಣಿದೇವಿಗೆ ಕಣಿಯ ಹೇಳಿ । ಗಿರಿಗೆ ಬಂದು ಸೇರಿದ
ಕಾಂತೆರೆಲ್ಲ ಕೂಡಿಕೊಂಡು । ಆಗ ಬಕುಳೆ ಬಂದಳು
ಬನ್ನಿರೆಮ್ಮ ಸದನಕೆನುತ । ಬಹಳ ಮಾತನಾಡಿದರು
ತಂದೆತಾಯಿ ಬಂಧುಬಳಗ । ಹೊನ್ನು ಹಣ ಉಂಟೆಂದರು
ಇಷ್ಟು ಪರಿಯಲ್ಲಿದ್ದವಗೆ । ಕನ್ಯೆ ಯಾಕೆ ದೊರಕಲಿಲ್ಲ
ದೊಡ್ಡವಳಿಗೆ ಮಕ್ಕಳಿಲ್ಲ । ಮತ್ತೆ ಮದುವೆ ಮಾಡ್ವೆವು
ಬೃಹಸ್ಪತೀಯ ಕರೆಸಿದ । ಲಗ್ನಪತ್ರಿಕೆ ಬರೆಸಿದ
ಶುಕಾಚಾರ್ಯರ ಕರೆಸಿದ । ಮದುವೆ ಓಲೆ ಬರೆಸಿದ
ವಲ್ಲಭೇನ ಕರೆವುದಕ್ಕೆ । ಕೊಲ್ಹಾಪುರಕೆ ಪೋದರು
ಗರುಡನ ಹೆಗಲನೇರಿಕೊಂಡು । ಬೇಗ ಹೊರಟು ಬಂದರು
ಅಷ್ಟವರ್ಗವನ್ನು ಮಾಡಿ । ಇಷ್ಟದೇವರ ಪೂಜಿಸಿ
ಲಕ್ಷ್ಮೀ ಸಹಿತ ಆಕಾಶ ರಜನ । ಪಟ್ಟಣಕ್ಕೆ ಬಂದರು
ಕನಕಭೂಷಣವಾದ ತೊಡಿಗೆ । ಕಮಲನಾಭ ತೊಟ್ಟನು
ಕನಕಭೂಷಣವಾಧ ಮಂಟಪ । ಕಮಲನಾಭ ಏರಿದ
ಕಮಲನಾಭಗೆ ಕಾಂತೆಮಣಿಯ । ಕನ್ಯಾದಾನವ ಮಾಡಿದ
ಕಮಲನಾಭ ಕಾಂತೆ ಕೈಗೆ । ಕಂಕಣವನ್ನೇ ಕಟ್ಟಿದ
ಶ್ರೀನಿವಾಸ ಪದ್ಮಾವತಿಗೆ । ಮಾಂಗಲ್ಯವನೆ ಕಟಿದ
ಶ್ರೀನಿವಾಸನ ಮದುವೆ ನೋಡೆ । ಸ್ತ್ರೀಯರೆಲ್ಲರು ಬನ್ನಿರೆ
ಪದ್ಮಾವತಿಯ ಮದುವೆ ನೋಡೆ । ಮುದ್ದು ಬಾಲೆಯರು ಬನ್ನಿರೇ
ಶಂಕೆಯಿಲ್ಲದೆ ಹಣವ ಸುರಿದು । ವೆಂಕಟೇಶನ ಕಳುಹಿದ
ಲಕ್ಷ ತಪ್ಪು ಎನ್ನಲುಂಟು । ಪಕ್ಷಿವಾಹನ ಸಲಹೆನ್ನ
ಕೋಟಿ ತಪ್ಪು ಎನ್ನಲುಂಟು । ಕುಸುಮನಾಭ ಸಲಹೆನ್ನ
ಭಕ್ತಿಯಿಂದಲಿ ಹೇಳಿ ಕೇಳಿದವರಿಗೆ । ಮುಕ್ತಿ ಕೊಡುವ ಹಯವದನ
ಜಯ ಜಯ ಶ್ರೀನಿವಾಸನಿಗೆ । ಜಯ ಜಯ ಪದ್ಮಾವತಿಗೆ
ಒಲಿದಂತಹ ಶ್ರೀಹರಿಗೆ । ನಿತ್ಯ ಶುಭ ಮಂಗಳ
ಶೇಷಾದ್ರಿಗಿರಿವಾಸ । ಶ್ರೀದೇವಿ ಅರಸಗೆ
ಕಲ್ಯಾಣಮೂರುತಿಗೆ । ನಿತ್ಯ ಜಯ ಮಂಗಳ ॥